ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಬೀದರ್ ಬ್ರಿಮ್ಸ್ ವೈದ್ಯಕೀಯ ಕಾಲೇಜಿನ ಅವ್ಯವಹಾರದ ಕುರಿತು.

ಶ್ರೀ ಅರವಿಂದಕುಮಾರ್‌ಅರಳಿ(ವಿಧಾನಸಭೆಯಿಂದಚುನಾಯಿತರಾದವರು):-

52 (153) ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2018-19 ಮತ್ತು 2019-20ರಲ್ಲಿ ಎಷ್ಟು ಜನರನ್ನು ನೇಮಕ ಮಾಡಿಕೊಳ್ಳಲಾಗಿದೆ; ನೇಮಕಾತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿದೆಯೇ; ಹೊರಡಿಸಿದ್ದಲ್ಲಿ, ಅಧಿಸೂಚನೆಯ ಪ್ರತಿಯನ್ನು ನೀಡುವುದು ; ಮತ್ತು ಯಾವ ರೀತಿಯಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿದೆ; ನೇಮಕವಾದಂತಹ ಅಭ್ಯರ್ಥಿಗಳ ವಿವರ ನೀಡುವುದು ;

(ಆ) ಬ್ರಿಮ್ಸ್ ಮಹಾವಿದ್ಯಾಲಯದಲ್ಲಿ ನಡೆದಿದೆಯೆನ್ನಲಾದ ಭ್ರಷ್ಟಾಚಾರವನ್ನು ಎ.ಸಿ.ಬಿ ತನಿಖೆ ನಡೆಸಿದೆಯೇ; ನಡೆದಿದ್ದಲ್ಲಿ, ತನಿಖೆಯ ವರದಿಯ ವಿವರ ಒದಗಿಸುವುದು; ಹಾಗೂ ಕ್ರಮ ಕೈಗೊಂಡ ಬಗ್ಗೆ ವಿವರ ನೀಡುವುದು ;

(ಇ) ಬ್ರಿಮ್ಸ್ ಆಸ್ಪತ್ರೆಯಲ್ಲಿ ರೋಗಿಗಳಿಗೆ ನೀಡುತ್ತಿರುವ ಆಹಾರ ಪದಾರ್ಥಗಳ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?